# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 46 |
| ಸದಸ್ಯರ ಹೆಸರು | : | ಶ್ರೀ ಸಂದೇಶ್ ನಾಗರಾಜ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 09-07-2018. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳ ಸಚಿವರು. |

| ಕ್ರ.ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಗ್ರಾಮ ಪಂಚಾಯತಿಗಳಲ್ಲಿ ಸೇವೆ ಸಲ್ಲಿಸುತ್ತಿರುವ ಸುಮಾರು 51,114 ನೌಕರರನ್ನು ಇ.ಎಫ್.ಎಂ.ಎಸ್. ವ್ಯಾಪ್ತಿಗೆ ಸೇರ್ಪಡೆಗೊಳಿಸಲು ಕ್ರಮ ಜರುಗಿಸಲಾಗುವುದೇ; ಈ ಬಗ್ಗೆ ಸರ್ಕಾರಿ ಆದೇಶ ಹೊರಡಿಸಿದ್ದರೂ ಅದು ಇನ್ನೂ ಕಾರ್ಯಗತವಾಗದಿರಲು ಕಾರಣಗಳೇನು; ಸ್ಥಳೀಯ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಉಳಿಕೆ ಸುಮಾರು 17,000 ನೌಕರರನ್ನೂ ಕೂಡ ಆರ್.ಡಿ.ಪಿ.ಆರ್. ಇಲಾಖೆಯ ವ್ಯಾಪ್ತಿಗೆ ತರಲು ಕ್ರಮ ಜರುಗಿಸಲಾಗುವುದೇ;<br>........... | ಗ್ರಾಮ ಪಂಚಾಯಿತಿ ನೌಕರರಿಗೆ ಗ್ರಾಮ ಪಂಚಾಯಿತಿಗಳು ಸಮರ್ಪಕವಾಗಿ ವೇತನ ಪಾವತಿಸದಿರುವ ಅಂಶವನ್ನು ಮನಗಂಡು ಸರ್ಕಾರವು ಮಾರ್ಚ್ 2018 ರಿಂದ ಕಾರ್ಮಿಕ ಇಲಾಖೆ ನಿಗದಿಪಡಿಸುರುವ ವೇತನವನ್ನು ಪಾವತಿಸಲು ಆದೇಶಿಸಿದೆ. ಅದರಂತೆ 2018-19ನೇ ಸಾಲಿನ ಮೊದಲನೇ ತ್ರೈಮಾಸಿಕ ಅನುದಾನವಾಗಿ ರೂ.129.00 ಕೋಟಿಗಳನ್ನು ಬಿಡುಗಡೆ ಮಾಡಲಾಗಿದೆ.<br><br>ಗ್ರಾಮ ಪಂಚಾಯಿತಿ ನೌಕರರ ಸೇವಾ ವಿವರಗಳನ್ನು ಪಡೆದು ಪರಿಶೀಲನೆ ನಡೆಸಿ ವೇತನ ಪಾವತಿಗೆ ಕ್ರಮವಹಿಸಬೇಕಾದ ಹಿನ್ನೆಲೆಯಲ್ಲಿ ವೇತನ ಪಾವತಿಯಲ್ಲಿ ವಿಳಂಬವಾಗಿರುತ್ತದೆ. ಪ್ರಸ್ತುತ ಗ್ರಾಮ ಪಂಚಾಯಿತಿಗಳಿಂದ ಆನ್-ಲೈನ್ ಮೂಲಕ ಸಲ್ಲಿಕೆಯಾಗಿರುವ ಅರ್ಹ 43,709 ನೌಕರರಿಗೆ ಸರ್ಕಾರದ ವತಿಯಿಂದ ನೀಡಲಾಗುವ ವೇತನವನ್ನು ಗ್ರಾಮ ಪಂಚಾಯಿತಿಗಳ ಮೂಲಕ ಪಾವತಿಸಲು ತಿಳಿಸಲಾಗಿದೆ.<br><br>ಇನ್ನುಳಿದ ನೌಕರರುಗಳಲ್ಲಿ ಹೆಚ್ಚಿನವರು ಗ್ರಾಮ ಪಂಚಾಯಿತಿಗಳಿಂದ ಕ್ರಮಬದ್ಧವಾಗಿ ನೇಮಕವಾಗದಿರುವವರು, ಜನ್ಮ ದಿನಾಂಕದ ದಾಖಲೆ ಇಲ್ಲದಿರುವವರು, ನಿಗದಿತ ವಿದ್ಯಾರ್ಹತೆ ಇಲ್ಲದಿರುವವರು ಸೇರಿರುತ್ತಾರೆ. ಈ ನೌಕರರುಗಳಿಗೆ ಗ್ರಾಮ ಪಂಚಾಯತಿಗಳು ತಮ್ಮ ಸ್ವಂತ ಸಂಪನ್ಮೂಲದಲ್ಲಿ ಕಾರ್ಮಿಕ ಇಲಾಖೆ ನಿಗದಿಪಡಿಸಿರುವ ವೇತನವನ್ನು ಕಡ್ಡಾಯವಾಗಿ ಪಾವತಿಸುವಂತೆ ಮತ್ತು ಯಾವುದೇ ಕಾರಣಕ್ಕೂ ಕೆಲಸದಿಂದ ತೆಗೆದು ಹಾಕದಂತೆ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲಾಗಿದೆ. |
| ಆ | 10 ವರ್ಷ ಸೇವೆ ಸಲ್ಲಿಸಿದ ಬಿಲ್‌ಕಲೆಕ್ಟರ್‌ಗಳಿಗೆ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಆಧಾರದ ಮೇಲೆ ಸೆಕ್ರೆಟರಿ ಗ್ರೇಡ್-2 ಹುದ್ದೆಗೆ ಬಡ್ತಿ ನೀಡುವ ಬಗ್ಗೆ ಪರಿಶೀಲಿಸಲಾಗುವುದೇ; | ಕರ್ನಾಟಕ ಸಾಮಾನ್ಯ ಸೇವೆಗಳು (ಅಭಿವೃದ್ಧಿ ಶಾಖೆ ಮತ್ತು ಸ್ಥಳೀಯ ಸರ್ಕಾರ ಶಾಖೆ) (ವೃಂದ ಮತ್ತು ನೇಮಕಾತಿ) (ತಿದ್ದುಪಡಿ) ನಿಯಮಗಳು 2017 ರಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಬಿಲ್‌ಕಲೆಕ್ಟರ್ ಇತ್ಯಾದಿ ವೃಂದದಿಂದ ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಲು ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆ ನಿಗದಿಪಡಿಸಲಾಗಿದೆ.<br><br>ಸದರಿ ನಿಯಮಗಳು ಜಾರಿಗೆ ಬರುವ ದಿನಾಂಕದಂದು ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆ ಹೊಂದಿ ಈಗಾಗಲೇ ಸೇವೆಯಲ್ಲಿರುವ ಬಿಲ್‌ಕಲೆಕ್ಟರ್ ಇತ್ಯಾದಿ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಆಯ್ಕೆ ಮೂಲಕ ನೇರ ನೇಮಕಾತಿ ಹೊಂದಲು ಪಿ.ಯು.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಅರ್ಹತೆಯನ್ನಾಗಿ ನಿಗದಿಪಡಿಸಿರುವುದು ಅನ್ವಯಿಸುವುದಿಲ್ಲವೆಂದು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

| | | |
|---|---|---|
| ಇ | ಜನಗಣತಿ ಆಧಾರದ ಮೇಲೆ ಎಷ್ಟು ಗ್ರಾಮ ಪಂಚಾಯತಿಗಳನ್ನು ಗ್ರೇಡ್-2 ರಿಂದ ಗ್ರೇಡ್-1 ಕ್ಕೆ ಮೇಲ್ದರ್ಜೆಗೇರಿಸಲು ಸರ್ಕಾರ ಉದ್ದೇಶಿಸಲಾಗಿದೆ. | 2011 ರ ಜನಗಣತಿ ಆಧಾರದ ಮೇಲೆ 1257 ಗ್ರೇಡ್-2 ಗ್ರಾಮ ಪಂಚಾಯತಿಗಳನ್ನು ಗ್ರೇಡ್-1 ಗ್ರಾಮ ಪಂಚಾಯತಿಗಳನ್ನಾಗಿ ಮೇಲ್ದರ್ಜೇಗೇರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. |

ಸಂಖ್ಯೆ. ಗ್ರಾಅಪ 639 ಗ್ರಾಪಂಅ 2018

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್,
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು
ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.